

ಹಳಿಯಾಳದಲ್ಲಿ ಭಗವದ್ಗೀತಾ ಅಭಿಯಾನ ಕಾರ್ಯಕ್ರಮವನ್ನು ಗಂಗಾಧರೇಂದ್ರ ಸರಸ್ವತೀ ಸ್ವಾಮೀಜಿ ಉದ್ಘಾಟಿಸಿದರು

# ‘ಭಗವದ್ಗೀತೆ ಅಧ್ಯಯನದಿಂದ ನೆಮ್ಮದಿ’

ಪ್ರಜಾವಾಣಿ ವಾರ್ತೆ

ಹಳಿಯಾಳ: ‘ಭಗವದ್ಗೀತೆ ಅಧ್ಯಯನದಿಂದ ಜೀವನದಲ್ಲಿ ನೆಮ್ಮದಿ ಹಾಗೂ ಶಾಂತಿ ಲಭಿಸುತ್ತದೆ. ಉತ್ತಮ ಜೀವನ ರೂಪಿಸಿಕೊಳ್ಳಲು ಸಹಕಾರಿಯಾಗುತ್ತದೆ’ ಎಂದು ಶಿರಸಿಯ ಸೋಂದಾ ಸ್ವರ್ಣವಲ್ಲೀ ಮಹಾಸಂಸ್ಥಾನದ ಗಂಗಾಧರೇಂದ್ರ ಸರಸ್ವತೀ ಸ್ವಾಮೀಜಿ ಹೇಳಿದರು.

ಇಲ್ಲಿನ ಭಗವದ್ಗೀತಾ ಅಭಿಯಾನ ತಾಲ್ಲೂಕು ಸಮಿತಿ, ಸರ್ವಜ್ಞೇಂದ್ರ ಸರಸ್ವತೀ ಪ್ರತಿಷ್ಠಾನ ಹಾಗೂ ತಾಲ್ಲೂಕಿನ ಭಕ್ತರ ಆಶ್ರಯದಲ್ಲಿ ತುಳಜಾಭವಾನಿ ದೇವಸ್ಥಾನದಲ್ಲಿ ಭಾನುವಾರ ಹಮ್ಮಿಕೊಂಡಿದ್ದ ಭಗವದ್ಗೀತಾ ಅಭಿಯಾನ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ವಿಆರ್‌ಡಿಎಂ ಟ್ರಸ್ಟ್‌ನ ಆಡಳಿತಾಧಿಕಾರಿ ಪ್ರಕಾಶ ಪ್ರಭು, ಭಗವದ್ಗೀತಾ ಅಭಿಯಾನದ ಸಂಯೋಜಕ ಸುರೇಂದ್ರ ಜೋಶಿ ಇದ್ದರು.